(ಇ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗೃಹ ಖಾತೆ) : ಮಾನ್ಯ ಅಧ್ಯಕ್ಷರೆ, ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳ 24ನೇ ಪಟ್ಟಿಯಲ್ಲಿರುವ 65 ಪ್ರಶ್ನೆಗಳ ಪೈಕಿ 45 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ವಿಶ್ವೇಶ್ವರಯ್ಯ ನಾಲೆಯ ಆಧುನೀಕರಣ ಕಾಮಗಾರಿಯು ಸ್ಥಗಿತಗೊಂಡಿರುವ ಕುರಿತು

2659 (3427) ಶ್ರೀ ಎಂ. ಎಸ್. ಆತ್ಮಾನಂದ (ಮಂಡ್ಯ): ಮಾನ್ಯ ಬೃಹತ್ ಮತ್ತು ಮಧ್ಯಮನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಶ್ವೇಶ್ವರಯ್ಯ ನಾಲೆಯ ಆಧುನೀಕರಣ ಕಾಮಗಾರಿಯ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಆಧುನೀಕರಣದ ಕಾಮಗಾರಿಯನ್ನು ಮುಂದುವರಿಸುವ ಅವಶ್ಯಕತೆಯನ್ನು ಸರ್ಕಾರವು ಮನಗಂಡಿದೆಯೇ;

ಇ) ಹಾಗಿದ್ದಲ್ಲಿ ಈ ಬಗ್ಗೆ ಯಾವ ಕ್ರಮವನ್ನು ಕೈಗೊಳ್ಳಲಾಗುತ್ತದೆ;

ಈ) ಐ.ಸಿ. ಬಯಲಿನ ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಯಲ್ಲಿ ಎಷ್ಟು ಕಿ.ಮೀ. ರಸ್ತೆ ಇದೆ?

ಶ್ರೀ ಎಚ್.ಕೆ. ಪಾಟೀಲ್ (ಬೃಹತ್ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು)

ಅ) ವಿಶ್ವೇಶ್ವರಯ್ಯ ನಾಲೆಯ ಆಧುನೀಕರಣದಡಿಯಲ್ಲಿ ಬರುವ ಅನುಮೋದಿತ ಕಾಮಗಾರಿಗಳ ಮೂಲಕ ತೆಗೆದುಕೊಂಡಿರುವುದು ಸ್ಥಗಿತಗೊಂಡಿರುವುದಿಲ್ಲ.

ಆ) ಇದರ ಬಗ್ಗೆ ಬೇಡಿಕೆ ಇದ್ದು, ಪರಿಶೀಲಿಸಲಾಗುವುದು.

ಇ) -ತದೇವ -

ಈ) ವಿಶ್ವೇಶ್ವರಯ್ಯ ನಾಲೆಯ ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಯಲ್ಲಿ 547.15 ಕಿ.ಮೀ ಅಚ್ಚುಕಟ್ಟು ರಸ್ತೆ ಇದೆ.

ಮಂಡ್ಯ ನಗರದಲ್ಲಿ ಪೋಲೀಸ್ ಠಾಣೆಗಳ ಅವಶ್ಯಕತೆ

2660 (3428) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರದ ಜನಸಂಖ್ಯೆಗೆ ಅನುಗುಣವಾಗಿ ಮಂಡ್ಯ ನಗರದಲ್ಲಿ ಪೋಲೀಸ್ ಠಾಣೆಗಳು ಇಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗುವುದು?